## ಕರ್ನಾಟಕ ಸರ್ಕಾರ

ಸಂಖ್ಯೆ : ಸಂಕಇ06 ಕೆಒಎಲ್ 2002

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ : 15-03-2002.

## ಸುತ್ತೋಲೆ

ವಿಷಯ :- ಸರ್ಕಾರ ಮತ್ತು ಸರ್ಕಾರಿ ಅಂಗ ಸಂಸ್ಥೆಗಳ ಸಮಾರಂಭಗಳ ಬ್ಯಾನರ್‌ಗಳಲ್ಲಿ (ನಾಮಪಟ್ಟಿಗಳಲ್ಲಿ) ಕನ್ನಡವನ್ನು ಬಳಸುವ ಬಗ್ಗೆ.

ಉಲ್ಲೇಖ : 1) ಕರ್ನಾಟಕ ರಾಜ್ಯ ಭಾಷಾ ಅಧಿನಿಯಮ 1963

2) ಸುತ್ತೋಲೆ ಸಂಖ್ಯೆ : ಜೆಎಡಿ 58 ಪಿಒಎಲ್ 71, ದಿನಾಂಕ : 8-12-1991.

ಕನ್ನಡವು ಕರ್ನಾಟಕ ರಾಜ್ಯದ ಆಡಳಿತ ಭಾಷೆಯಾಗಿ ಇರತಕ್ಕದ್ದೆಂದು ಉಲ್ಲೇಖ (1) ರಲ್ಲಿನ ಕರ್ನಾಟಕ ಅಧಿನಿಯಮ 1963 ರಲ್ಲಿ ತಿಳಿಸಲಾಗಿದೆ.

ಸರ್ಕಾರಿ ಕಛೇರಿಗಳ ನಾಮಫಲಕಗಳನ್ನು ಕನ್ನಡದಲ್ಲಿ ಇರುವಂತೆ ನೋಡಿಕೊಳ್ಳಲು ಉಲ್ಲೇಖ (2) ರ ಸುತ್ತೋಲೆಯಲ್ಲಿ ತಿಳಿಸಲಾಗಿದೆ.

ಹೀಗೆ ಕರ್ನಾಟಕ ಸರ್ಕಾರವು ಕನ್ನಡವನ್ನು ಎಲ್ಲಾ ಹಂತಗಳಲ್ಲಿ ಅನುಷ್ಠಾನಗೊಳಿಸಲು ಕ್ರಮಗಳನ್ನು ಕೈಗೊಳ್ಳುತ್ತಾ ಅನೇಕ ಸುತ್ತೋಲೆ ಮತ್ತು ಆದೇಶಗಳನ್ನು ಹೊರಡಿಸುತ್ತಾ ಬಂದಿದೆ. ಆದರೂ ಸರ್ಕಾರದ ಇಲಾಖೆಗಳು

ಕೆಲವು ಸಣ್ಣಪುಟ್ಟ ಸಂಗತಿಗಳಲ್ಲಿ ಕನ್ನಡವನ್ನು ನಿರ್ಲಕ್ಷಿಸುತ್ತಿರುವ ಅಂಶಗಳು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇಂಥವುಗಳಲ್ಲಿ ಸರ್ಕಾರಿ ಮತ್ತು ಸರ್ಕಾರಿ ಸಂಘ ಸಂಸ್ಥೆಗಳ ವಿವಿಧ ಸಮಾರಂಭದ ಬ್ಯಾನರುಗಳಲ್ಲಿ (ನಾಮಪಟ್ಟಿಗಳು) ಕನ್ನಡವನ್ನು ನಿರ್ಲಕ್ಷಿಸುತ್ತಿರುವ ಅಂಶವೂ ಸೇರಿದೆ.

ಸರ್ಕಾರದ ವಿವಿಧ ಇಲಾಖೆಗಳು ನಡೆಸುವ ಅಧಿಕೃತ ಸಮಾರಂಭಗಳಲ್ಲಿ, ವೇದಿಕೆಯಲ್ಲಿ ಮತ್ತು ಸಮಾರಂಭದ ಹೊರಭಾಗದಲ್ಲಿ ಹಾಕುವ ಬ್ಯಾನರುಗಳಲ್ಲಿ ಕನ್ನಡವನ್ನು ಬಳಸುವುದು ಕಡ್ಡಾಯವಾಗಬೇಕು. ಆದ್ದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ.

1. ಕರ್ನಾಟಕ ಸರ್ಕಾರದ ಎಲ್ಲಾ ಇಲಾಖೆಗಳು, ನಿಗಮ, ಮಂಡಳಿಗಳು, ವಿಶ್ವವಿದ್ಯಾಲಯಗಳು, ಶಿಕ್ಷಣ ಸಂಸ್ಥೆಗಳು ಮತ್ತು ಸರ್ಕಾರದ ಆಡಳಿತಕ್ಕೊಳಪಟ್ಟ ಯಾವುದೇ ಸಂಸ್ಥೆಗಳು ನಡೆಸುವ ಸಮಾರಂಭಗಳಲ್ಲಿ ಬಳಸುವ ಬ್ಯಾನರುಗಳು ಕಡ್ಡಾಯವಾಗಿ ಕನ್ನಡದಲ್ಲಿರಬೇಕು.

2. ಅಂತರರಾಜ್ಯ, ರಾಷ್ಟ್ರೀಯ ಅಥವಾ ಅಂತರ ರಾಷ್ಟ್ರೀಯ ಸಮಾರಂಭಗಳಲ್ಲಿ ಕನ್ನಡದ ಜೊತೆಗೆ ಅದೇ ಬ್ಯಾನರ್‌ನಲ್ಲಿ, ಆಂಗ್ಲ ಅಥವಾ ಹಿಂದಿ ಭಾಷೆಯನ್ನು ಬಳಸಬಹುದು.

3. ಬ್ಯಾನರ್‌ಗಳಲ್ಲಿ ಕನ್ನಡವನ್ನು ಬಳಸದೆ ಇದ್ದರೆ, ಅದು ಸರ್ಕಾರದ ಭಾಷಾ ನೀತಿಯ ಉಲ್ಲಂಘನೆಯಾಗುತ್ತದೆ.

ಮೇಲ್ಕಂಡ ಸೂಚನೆಗಳನ್ನು ಉಲ್ಲಂಘಿಸಿದವರ ವಿರುದ್ಧ ಶಿಸ್ತಿನ ಕ್ರಮ ತೆಗೆದುಕೊಳ್ಳಲಾಗುವುದು.

ಸಹಿ/-
(ತೆರೇಸಾ ಭಟ್ಟಾಚಾರ್ಯ)
ಸರ್ಕಾರದ ಮುಖ್ಯ ಕಾರ್ಯದರ್ಶಿ

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು (ಕರ್ನಾಟಕ ರಾಜ್ಯ

ಪತ್ರದಲ್ಲಿ ಪ್ರಕಟಣೆಗಾಗಿ)

ಪ್ರತಿಗಳು :

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಹಾಗೂ ಅಭಿವೃದ್ಧಿ ಆಯುಕ್ತರು.
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗೃಹ ಮತ್ತು ಸಾರಿಗೆ ಇಲಾಖೆ.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.
5) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
6) ಮುಖ್ಯ ಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು
7) ಎಲ್ಲಾ ವಿಭಾಗಾಧಿಕಾರಿಗಳು.
8) ಎಲ್ಲಾ ಜಿಲ್ಲಾಧಿಕಾರಿಗಳು.
9) ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
10) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11) ಸರ್ಕಾರದ ಎಲ್ಲಾ ಹೆಚ್ಚುವರಿ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು.
12) ಎಲ್ಲಾ ವಿಶ್ವವಿದ್ಯಾಲಯಗಳ ಉಪಕುಲಸಚಿವರು.
13) ರಾಜ್ಯದ ಎಲ್ಲಾ ಪುರ / ನಗರ ಸಭೆಗಳ ಮುಖ್ಯಾಧಿಕಾರಿಗಳು, ಆಡಳಿತಾಧಿಕಾರಿಗಳು.
14) ರಾಜ್ಯದ ಎಲ್ಲಾ ನಿಗಮಗಳ ಮುಖ್ಯ ವ್ಯವಸ್ಥಾಪಕರುಗಳು / ವ್ಯವಸ್ಥಾಪಕ ನಿರ್ದೇಶಕರು.